Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 13-08-2022

**ಪತ್ರಿಕಾ ಪ್ರಕಟಣೆ:**

# ಪಾಲಕರ ಸಭೆ ಯಶಸ್ವಿ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ ಆಗಸ್ಟ್ 13 ರಂದು ಪಾಲಕರ ಸಭೆಯನ್ನು ಆಯೋಜಿಸಲಾಗಿತ್ತು. ಪ್ರಥಮ ಹಾಗೂ ದ್ವಿತೀಯ ವರ್ಷದ ವಿದ್ಯಾರ್ಥಿಗಳ ಪಾಲಕರು ಈ ಸಭೆಯಲ್ಲಿ ಪಾಲ್ಗೊಂಡು ತಮ್ಮ ಮಕ್ಕಳ ವಿದ್ಯಾಭ್ಯಾಸದ ಪ್ರಗತಿಯ ಬಗ್ಗೆ ಚರ್ಚಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ.ವಿ.ಎ.ಕುಲಕರ್ಣಿಯವರು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯ ಜವಾಬ್ದಾರಿಯು ಮಹಾವಿದ್ಯಾಲಯ ಹಾಗೂ ಪಾಲಕರ ಮೇಲಿದೆ, ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳ ಯಶಸ್ಸಿಗಾಗಿ ಪಾಲಕರು ಹಾಗೂ ಮಹಾವಿದ್ಯಾಲಯ ಕೈಜೋಡಿಸಿ ಕಾರ್ಯನಿರ್ವಹಿಸಬೇಕಿದೆ ಎಂದು ಹೇಳಿದರು. ಮಹಾವಿದ್ಯಾಲಯದ ಮೂಲ ಉದ್ದೇಶ ವಿದ್ಯಾರ್ಥಿಗಳಿಗೆ ತಾಂತ್ರಿಕ ಶಿಕ್ಷಣ ನೀಡುವುದರೊಂದಿಗೆ ಉತ್ತಮ ನಾಗರಿಕರನ್ನಾಗಿ ರೂಪಿಸುವುದಾಗಿದೆ ಎಂದು ನುಡಿದರು. ಮಹಾವಿದ್ಯಾಲಯದ ಪ್ಲೇಸ್ಮೆಂಟ್ ಚಟುವಟಿಕೆಯ ಬಗ್ಗೆ ಮಾತನಾಡುತ್ತಾ, ಪ್ರಸಕ್ತ ವರ್ಷದಲ್ಲಿ 400ಕ್ಕೂ ಅಧಿಕ ಉದ್ಯೋಗವಕಾಶಗಳನ್ನು ಮಹಾವಿದ್ಯಾಲಯದ ವಿದ್ಯಾರ್ಥಿಗಳು ಪಡೆದುಕೊಂಡಿದ್ದು, ಮುಂಬರುವ ದಿನಗಳಲ್ಲೂ ವಿದ್ಯಾರ್ಥಿಗಳಿಗೆ ಉತ್ತಮ ಉದ್ಯೋಗಾವಕಾಶಗಳನ್ನು ಒದಗಿಸುವ ನಿಟ್ಟಿನಲ್ಲಿ ಮಹಾವಿದ್ಯಾಲಯವು ಶ್ರಮಿಸುತ್ತಿದೆ ಎಂದು ಹೇಳಿದರು. ಮಹಾವಿದ್ಯಾಲಯದಲ್ಲಿರುವ ಕಲಿಕಾ ಪೂರಕ ಸೌಲಭ್ಯಗಳ ಬಗ್ಗೆ ವಿವರಿಸಿದರು. ಪ್ರತಿಯೊಂದು ವಿಭಾಗದ ಮುಖ್ಯಸ್ಥರು ಹಾಗೂ ಬೋಧಕ ಸಿಬ್ಬಂದಿಗಳು ಈ ಸಭೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡು ವಿದ್ಯಾರ್ಥಿಗಳ ಪ್ರಗತಿ ನೋಟವನ್ನು ಪಾಲಕರೆದುರು ತೆರೆದಿಟ್ಟರು. ಇದೇ ಸಂದರ್ಭದಲ್ಲಿ ಪ್ರಥಮ ಹಾಗೂ ತೃತೀಯ ಸೆಮಿಸ್ಟರ್ ಪರೀಕ್ಷೆಗಳಲ್ಲಿ ಉತ್ತಮ ಸಾಧನೆಗೈದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪಾಲಕರ ಸಮ್ಮುಖದಲ್ಲಿ ಪುರಸ್ಕರಿಸಲಾಯಿತು.

ಡೀನ್ ಎಫ್.ಐ.ಐ.ಐ. ಪ್ರೊ.ಸುಧೀರ್ ಕುಲಕರ್ಣಿ ಸ್ವಾಗತಿಸಿದರು. ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಆರ್.ಎಸ್.ಮುನ್ನೊಳ್ಳಿ ವಂದಿಸಿದರು. ಪ್ರೊ.ಲಕ್ಷ್ಮಿ ಹೆಚ್ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಪೋಷಕರು ಸಹ ಮಾತನಾಡಿ ಮಹಾವಿದ್ಯಾಲಯದ ಶೈಕ್ಷಣಿಕ ಕಾರ್ಯಚಟುವಟಿಕೆಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


LAW SOCIETY'S
DESHPANDE
ಕರ್ನಾಟಕ ಲಾ